# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ 574 /2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 6/1/21

**ವಿಷಯ:-** ದಿನಾಂಕ. 02.01.2021ರಂದು ನಡೆದ ವಾರ್ಡ್ ಸಂಖ್ಯೆ. 120ರ ಸಮಿತಿ ಸಭೆಯ ನಡವಳಿಗಳು

**ಉಲ್ಲೇಖ:-** ಆಯುಕ್ತರ ಕಛೇರಿ ಆದೇಶ ಸಂಖ್ಯೆ. ಬಿ12(5)ಪಿ.ಆರ್/35/2020/21, ದಿ. 21.09.2020.

1. ವಾರ್ಡ್ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಮುನಿಲಕ್ಷ್ಮಿ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಇತರೆ ಸದಸ್ಯರು ಮತ್ತು ಕಾರ್ಯದರ್ಶಿಯವರ ಸಮ್ಮುಖದಲ್ಲಿ ಪ್ರಾರಂಭಿಸಲಾಯಿತು.
2. ಕೆ.ಪಿ ಅಗ್ರಹಾರದ ಗಾಂಧಿಶಿಲೆ ಹತ್ತಿರ ಬಿಬಿಎಂಪಿ ಜಾಗದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಶೆಡ್‌ನ್ನು ತೆರವುಗೊಳಿಸಲು ~~ವುದಾಗಿ~~ ಅಧಿಕಾರಿಗಳಿಗೆ ಸೂಚಿಸಲಾಯಿತು.
3. ಗೂಡ್‌ಶೆಡ್ ರಸ್ತೆಯಲ್ಲಿ ಬಿಟ್ಟಿರುವ ಕಸವನ್ನು ತೆಗೆಯುವುದರ ಬಗ್ಗೆ ಅಧಿಕಾರಿಗಳು ಸರಿಯಾದ ಕ್ರಮ ವಹಿಸದೇ ಇರುವುದರಿಂದ ಸಭೆಯಲ್ಲಿ ಅಧ್ಯಕ್ಷರು ಅಸಮಾಧಾನ ವ್ಯಕ್ತಪಡಿಸಿದ್ದಾರೆ ಹಾಗಾಗಿ ಅಧಿಕಾರಿಗಳು ಸೂಕ್ತ ಕ್ರಮ ವಹಿಸಿ ಕಸವನ್ನು ವಿಲೇವಾರಿ ಮಾಡಲು ~~ವುದಾಗಿ~~ ಆರೋಗ್ಯಾಧಿಕಾರಿಗಳಿಗೆ ಸೂಚಿಸಲಾಯಿತು.
4. ಕೆ.ಪಿ ಅಗ್ರಹಾರದಲ್ಲಿ ಕಸದ ಆಟೋಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸದೇ ಇರುವುದರಿಂದ ಸಾರ್ವಜನಿಕರು ತಮ್ಮ ಮನೆಯ ಕಸವನ್ನು ರಸ್ತೆಗೆ ಎಸೆದು ಬ್ಲಾಕ್‌ಸ್ಪಾಟ್‌ಗಳನ್ನಾಗಿ ಮಾಡುತ್ತಿದ್ದಾರೆ ಹಾಗಾಗಿ ಕಸದ ಆಟೋಗಳಿಗೆ ಮೈಕುಗಳನ್ನು ಅಳವಡಿಸಿ ಜನರಿಗೆ ಕಸವನ್ನು ಆಟೋಗಳಿಗೆ ಕೊಡಲು ಸೂಚಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು
5. ವಾರ್ಡಿನ ಪ್ರಮುಖ ಸ್ಥಳಗಳಲ್ಲಿ ಸೊಳ್ಳೆಗಳಿಗೆ ಸಮರ್ಪಕವಾದ ಔಷಧಿ ಸಿಂಪಡಣೆ ಕಾರ್ಯಗಳನ್ನು ಕೈಗೊಳ್ಳುವ ಬಗ್ಗೆ ಆರೋಗ್ಯಾಧಿಕಾರಿಗೆ ಸೂಚಿಸಲಾಯಿತು.
6. ವಾರ್ಡ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಕಸದ ಲಾರಿಗಳು ಮತ್ತು ಆಟೋಗಳ ಸಂಖ್ಯೆಯ ಮಾಹಿತಿಯನ್ನು ತಿಳಿಸಲು ಹಾಗೂ ಕಾರ್ಯನಿರ್ವಹಣೆಯಲ್ಲಿರುವ ಆಟೋಗಳನ್ನು ಪ್ರತಿನಿತ್ಯ ಸರಿಯಾದ ಸಮಯಕ್ಕೆ ಮನೆಗಳ ಹತ್ತಿರ ಹೋಗುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.
7. ಕೆ.ಪಿ ಅಗ್ರಹಾರದ 8ನೇ ಕ್ರಾಸ್, ನೇತಾಜಿನಗರದಲ್ಲಿ ರಸ್ತೆ ಬದಿಯಲ್ಲಿನ ಡ್ರೈನ್ ಮತ್ತು ಕಲ್ವರ್ಟ್ ದುರಸ್ಥಿಗೊಂಡಿದ್ದು, ಸದರಿ ಕಾಮಗಾರಿಯನ್ನು ಶೀಘ್ರವೇ ಸರಿಪಡಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.
8. ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

Scanned by CamScanner

ನಿರ್ಣಯ:-

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತ್ತು.

| | |
|---|---|
| ಕಾರ್ಯದರ್ಶಿ | ಅಧ್ಯಕ್ಷರು |
| ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120 | ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120 |
| ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು :

1. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
3. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಾಟನ್‌ಪೇಟೆ ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಕಡತಕ್ಕೆ.

Scanned by CamScanner